ದಿನಾಂಕಃ 21-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ,

1) ನನ್ನ ಮತ್ತು ಆರೋಪಿಯ ಗಂಡನ ನಡುವೆ ಆಗಿರುವ ಹಣಕಾಸಿನ ವ್ಯವಹಾರದ ಬಗ್ಗೆ ಆರೋಪಿಗೆ ಗೊತ್ತಿರುವುದಿಲ್ಲ. ನನ್ನ ಮತ್ತು ಆರೋಪಿಯ ನಡುವೆ ಹಣಕಾಸಿನ ವ್ಯವಹಾರ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ಮೊಬೈಲ್ ಸಂಖ್ಯೆ ನನಗೆ ಗೊತ್ತಿರುತ್ತದೆ. ತಿಳುವಳಿಕೆ ಪತ್ರದಲ್ಲಿ ಆರೋಪಿಯ ಮೊಬೈಲ್ ಸಂಖ್ಯೆ ನಮೂದು ಮಾಡಲು ತೊಂದರೆ ಇರುವುದಿಲ್ಲ. ತಿಳುವಳಿಕೆ ಪತ್ರ ಆರೋಪಿಗೆ ಜಾರಿಯಾಗಿರುವುದಿಲ್ಲ ಎಂದರೆ ಸರಿಯಲ್ಲ. ತಿಳುವಳಿಕೆ ಪತ್ರದ ಬಗ್ಗೆ ಆರೋಪಿಗೆ ಮಾಹಿತಿ ಇಲ್ಲದ ಕಾರಣ ಆರೋಪಿ ಪ್ರತ್ಯುತ್ತರ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿ ನನ್ನಿಂದ ಹಣ ಸ್ವೀಕರಿಸಿದ ಬಗ್ಗೆ ನಿಶಾನೆ ಪಿ-1 ಚೆಕ್ಕು ಹೊರತುಪಡಿಸಿ ಇತರೇ ದಾಖಲಾತಿ ಇರುವುದಿಲ್ಲ.

ಮುಂದುವರೆದ ಪಾಟೀ ಸವಾಲು ವಿಚಾರಣೆಗೆ ಕಾಲಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ